# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 886

ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್.ಕೆ.
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 21.09.2022.

ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರಾವಳಿ ಭಾಗದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಅನಾದಿಕಾಲದಿಂದ ಅನುಭವಿಸಿ ಕೊಂಡು ಬರುತ್ತಿದ್ದ, ಕಾನೆ, ಬಾನೆ, ಕುಮ್ಕಿ ಹೊಂದಿರುವ ಖದೀಮ್ ವರ್ಗದಾರರಿಗೆ ಕಾನೂನು ನಿಯಾಮವಳಿಗಳನ್ನು ರೂಪಿಸಿ ಕುಮ್ಕಿಯನ್ನು ಸಕ್ರಮಗೊಳಿಸಲಾಗುವುದೇ; | ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 79(2)ರನ್ವಯ "ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಕುಮ್ಕಿ ಭೂಮಿಗಳು, ಬಾಣೆ ಭೂಮಿಗಳು ಮತ್ತು ಕಾಣೆ ಭೂಮಿಗಳು, ಉತ್ತರ ಕನ್ನಡ ಜಿಲ್ಲೆಯಲ್ಲಿನ ಬೆಟ್ಟ ಭೂಮಿಗಳು ಮತ್ತು ಹಾಡಿ ಭೂಮಿಗಳು, ಮೈಸೂರು ಪ್ರದೇಶದಲ್ಲಿನ ಕಾನು ಮತ್ತು ಸೊಪ್ಪಿನ ಬೆಟ್ಟ ಭೂಮಿಗಳು, ಕೊಡಗಿನ ಜಮ್ಮ ಮತ್ತು ಬಾಣೆ ಭೂಮಿಗಳು ಮತ್ತು ಹೈದರಾಬಾದ್ ಪ್ರದೇಶದಲ್ಲಿ (ಮೋಟಸ್ಥಲ್ ತರಿ ಭೂಮಿಗಳು) (Motasthal wet lands) ಇವುಗಳ ಬಗೆಗಿನ ವಿಶೇಷಾಧಿಕಾರಗಳು ಮುಂದುವರೆಯತಕ್ಕದ್ದು" ಎಂದು ತಿಳಿಸಲಾಗಿದೆ.<br><br>ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ; ಸಸಂಶಾ 01 ಸಿಎಸ್‌ಸಿ 2022, ದಿನಾಂಕ; 29.01.2022 ಮತ್ತು 11.02.2022 ರಂದು "ಗೋಮಾಳ, ಗಾಯರಾಣ, ಹುಲ್ಲುಬನ್ನಿ, ಸೊಪ್ಪಿನಬೆಟ್ಟ ಇತ್ಯಾದಿ ಗ್ರಾಮೀಣ ಪ್ರದೇಶದ ಸರ್ಕಾರಿ ಜಮೀನುಗಳನ್ನು ಮಂಜೂರು ಮಾಡುವ ಕುರಿತು ಒಂದು ನೀತಿಯನ್ನು ರೂಪಿಸಲು" ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯ ತೀರ್ಮಾನದಂತೆ ಮುಂದಿನ ಕ್ರಮವಹಿಸಲಾಗುತ್ತದೆ. |
| ಆ) | ಸದರಿ ವಿಚಾರ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | |

ಸಂಖ್ಯೆ: ಆರ್‌ಡಿ 207 ಎಲ್‌ಜಿಕ್ಯೂ 2022

(ಆರ್.ಅಶೋಕ)
ಕಂದಾಯ ಸಚಿವರು